## ಮಾದರಿ ಪ್ರಶ್ನೆ ಪತ್ರಿಕೆ–2017

# Model Question paper-2017

**CCE RF**
**CCE RR**

**ಸಂಕೇತ ಸಂಖ್ಯೆ: 01K**

**Code No: 01K**

**ವಿಷಯ:– ಪ್ರಥಮ ಭಾಷೆ–ಕನ್ನಡ**

**Subject: First language-KANNADA**

**(ಹೊಸ ಪಠ್ಯಕ್ರಮ/New Syllabus)**

**(ಶಾಲಾ ಅಭ್ಯರ್ಥಿ + ಪುನರಾವರ್ತಿತ ಶಾಲಾ ಅಭ್ಯರ್ಥಿ / Regular Fresh + Regular Repeater)**

**ಸಮಯ: ಬೆಳಿಗ್ಗೆ 9.30 ರಿಂದ ಮಧ್ಯಾಹ್ನ 12.30 ರವರೆಗೆ** **Time: 9.30 to 12.30 Pm**

**ಗರಿಷ್ಠ ಅಂಕಗಳು: 100** **Maximum marks : 100**

**ಪರೀಕ್ಷಾರ್ಥಿಗಳಿಗೆ ಸಾಮಾನ್ಯ ಸೂಚನೆಗಳು :**

1. ಈ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತದೆ.
5. ಪ್ರಶ್ನೆ ಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ಕೊಡಲಾಗಿದೆ.

## ವಿಭಾಗ – 'ಎ'

### (ಪಠ್ಯಗಳ ಅಧ್ಯಯನ – ಗದ್ಯ, ಪದ್ಯ, ಪೋಷಕ ಅಧ್ಯಯನ)

ಈ ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ **ಒಂದೊಂದು** ವಾಕ್ಯದಲ್ಲಿ ಉತ್ತರಿಸಿ : 9 × 1 = 9

1. ಅಮೆರಿಕದ ವಿದ್ಯಾರ್ಥಿಗಳನ್ನು ರಂಜಿಸಿದ ಕನ್ನಡ ಸಾಹಿತ್ಯದ ಭಾಗಗಳು ಯಾವುವು ?

2. ಧರ್ಮಗಳು ಹಾಕಿಕೊಟ್ಟಿರುವ ರತ್ನಪಾಠ ಏನು ?

3. ವಿಶ್ವೇಶ್ವರಯ್ಯನವರ ಹುಟ್ಟುಹಬ್ಬದ ನೆನಪಿಗಾಗಿ ಯಾವ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ?

4. ದೇವನೂರರ ಪ್ರಕಾರ 'ನನ್ನ ದೇವರು' ಎಂದರೆ ಯಾರು ?

5. ದುಷ್ಟಬುದ್ಧಿಯು ಧರ್ಮಬುದ್ಧಿಯ ಮೇಲೆ ಯಾವ ಆರೋಪವನ್ನು ಹೊರಿಸಿದನು ?

6. 'ಘಟಸಂಭೂತ' ಎಂದರೆ ಯಾರು ?

7. ಹಲಗಲಿಯ ಬೇಡರಲ್ಲಿ ಪ್ರಮುಖರಾದ ನಾಲ್ವರನ್ನು ಹೆಸರಿಸಿ.

8. ಜೇಡರ ದಾಸಿಮಯ್ಯನವರ ಪ್ರಕಾರ ನಿಷ್ಠೆಯುಳ್ಳ ಭಕ್ತನಿಗೆ ನಟ್ಟಡವಿಯೂ ಸಹ ಏನೆನಿಸುತ್ತದೆ ?

9. ಮುದ್ದು ಪಾರಿವಾಳಗಳ ಜೋಡಿ ಎಲ್ಲಿ ಸಂಸಾರ ಹೂಡಿತ್ತು ?

ಈ ಕೆಳಗಿನ ಪ್ರಶ್ನೆಗಳಿಗೆ **ಮೂರು–ನಾಲ್ಕು** ವಾಕ್ಯಗಳಲ್ಲಿ ಉತ್ತರ ಬರೆಯಿರಿ : 10 × 2 = 20

10. ಸಹಾನುಭೂತಿಗಾಗಿ ಇರಬೇಕಾದ ಎರಡು ಕಣ್ಣುಗಳಾವುವು ಎಂದು ವಿ.ಕೃ. ಗೋಕಾಕರು ಹೇಳಿದ್ದಾರೆ ?

11. ಹೈದರಾಬಾದ್ ನಗರದಲ್ಲಿ ವಿಶ್ವೇಶ್ವರಯ್ಯನವರು ಸಲ್ಲಿಸಿದ ಸೇವೆ ಯಾವುದು ?

12. ಪರಮಹಂಸರ ವ್ಯಕ್ತಿತ್ವದ ವೈಶಿಷ್ಟ್ಯ ಎಂಥದ್ದು ?

13. ಧರ್ಮಬುದ್ಧಿಗೆ ದುಷ್ಟಬುದ್ಧಿಯು ಯಾವ ಸಲಹೆಯಿತ್ತನು ?

14. ಹಲಗಲಿಯ ಬೇಡರು ದಂಗೆ ಏಳಲು ಕಾರಣವೇನು ?

15. ಮಾತಿನ ಮಹತ್ತ್ವವನ್ನು ಬಸವಣ್ಣನವರು ಹೇಗೆ ವಿಶ್ಲೇಷಿಸಿದ್ದಾರೆ ?

16. ಸಮಾಜ ಸುಧಾರಣೆ ಯಾವಾಗ ಸಾಧ್ಯವೆಂದು ಎಚ್. ನರಸಿಂಹಯ್ಯನವರು ವಿವರಿಸಿದ್ದಾರೆ ?

17. ಭರತ ಚಕ್ರವರ್ತಿಗೆ ತನ್ನ ಹೆಸರನ್ನು ವೃಷಭಾಚಲದಲ್ಲಿ ಬರೆಸಲು ಏಕೆ ಸಾಧ್ಯವಾಗಲಿಲ್ಲ ?

18. 'ಅನ್‌ಟು ದಿಸ್ ಲಾಸ್ಟ್' ಕೃತಿ ಗಾಂಧೀಜಿಯವರ ಮೇಲೆ ಯಾವ ಪರಿಣಾಮ ಬೀರಿತು ?

19. 'ಉಪ್ಪು' ಎಂಬ ಅರ್ಥ ಬರಲು ಹೇಳಿದ ಒಗಟನ್ನು ಬರೆಯಿರಿ.

ಈ ಕೆಳಗಿನ ವಾಕ್ಯಗಳ ಸಂದರ್ಭ ಮತ್ತು ಸ್ವಾರಸ್ಯವನ್ನು ವಿವರಿಸಿ : $4 \times 3 = 12$

20. "ಮಿಕ್ಕ ಹೊನ್ನಿಂಗೆ ಜೀರ್ಣಜಿನಾಲಯಂಗಳಿಗೆ ಸೊದೆಯನಿಕ್ಕುವುದು"

21. "ನಾನು ಮುಖ ಮೇಲಾಗಿ ಬಿದ್ದಿದ್ದೆನೆ"

22. "ಜಾನಕಿಯ ಮಗನಿದಕೆ ಬೆದರುವನೆ"

23. "ಗಡಿಯೂ ಇಲ್ಲ ಆಚೆ ಈಚೆಯೂ ಇಲ್ಲ"

ಈ ಕೆಳಗಿನ ಕವಿಗಳ / ಸಾಹಿತಿಗಳ ಸ್ಥಳ, ಕಾಲ, ಕೃತಿ ಮತ್ತು ಪ್ರಶಸ್ತಿ / ಬಿರುದುಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ : $2 \times 3 = 6$

24. ಗೊರೂರು ರಾಮಸ್ವಾಮಿ ಅಯ್ಯಂಗಾರ್

25. ಆದಿಕವಿ ಪಂಪ

26. ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ : $1 \times 4 = 4$

ಯುಗ–ಯುಗಗಳ ______________________

______________________

______________________

______________________ ಹರಸಿ

______________________ ನೋಡಿದಿರಾ ?

ಅಥವಾ

ನೀಲ ಮೇಘ ಮಂಡಲ ________________________________________

________________________________________

________________________________________

________________________________________ಕಣ್ಣಾ

________________________________________ನೋಡಿದಿರಾ ?

27. ಈ ಕೆಳಗಿನ ಪದ್ಯಭಾಗವನ್ನು ಓದಿ ಅರ್ಥ ಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ : $1 \times 4 = 4$

ಕಲುಷಿತವಾದೀ ನದೀಜಲಗಳಿಗೆ
ಮುಂಗಾರಿನ ಮಳೆಯಾಗೋಣ
ಬರಡಾಗಿರುವೀ ಕಾಡುಮೇಡುಗಳ
ವಸಂತವಾಗುತ ಮುಟ್ಟೋಣ.

ಈ ಕೆಳಗಿನ ಪ್ರಶ್ನೆಗಳಿಗೆ **ಎಂಟು** ಅಥವಾ **ಹತ್ತು** ವಾಕ್ಯಗಳಲ್ಲಿ ಉತ್ತರ ಬರೆಯಿರಿ : $2 \times 4 = 8$

28. ಶಬರಿಯ ಚಿಂತೆ ಹಿಂಗಿಹೋದ ಸಂದರ್ಭದ ಸ್ವಾರಸ್ಯವನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

**ಅಥವಾ**

ನಂಬಿಕೆಟ್ಟವರಿಲ್ಲ ಎಂಬ ಮಾತು ಶಬರಿಯ ಪಾಲಿಗೆ ಹೇಗೆ ನಿಜವಾಗಿದೆ ? ವಿವರಿಸಿ.

29. ಪಾಂಡವರು ಸಹೋದರರೆಂದು ತಿಳಿದಾಗ ಕರ್ಣನ ಮನಃಸ್ಥಿತಿಯನ್ನು ತಿಳಿಸಿ.

**ಅಥವಾ**

ಕರ್ಣನಿಗೆ ಶ್ರೀಕೃಷ್ಣನು ಒಡ್ಡಿದ ಆಮಿಷಗಳೇನು ?

ಈ ಕೆಳಗಿನ ಗದ್ಯಭಾಗವನ್ನು ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ : $2 \times 2 = 4$

30. ಒಂದು ಭಾಷೆ ಸತ್ತ್ವಪೂರ್ಣವಾಗಬೇಕಾದರೆ ಅದನ್ನಾಡುವ ಜನ ಅಭಿಮಾನಧನರೂ, ಬುದ್ಧಿಶಾಲಿಗಳೂ, ಪ್ರಯೋಗಶೀಲರೂ ಆಗಿರಬೇಕು. ನಾಲ್ಕೈದು ಶತಮಾನಗಳ ಹಿಂದೆ ಆಂಗ್ಲಭಾಷೆ ಯೂರೋಪಿನ ಸಾಮಾನ್ಯ ಭಾಷೆಗಳಲ್ಲಿ ಒಂದಾಗಿತ್ತು. ಆಂಗ್ಲ ಜನತೆ ಸಾಹಸ ಜೀವಿಯಾಯಿತು, ಬುದ್ಧಿಶಾಲಿಯಾಯಿತು, ಸೂರ್ಯನು ಎಂದೂ ಮುಳುಗನೆನ್ನುವಂತಹ ವಿಸ್ತಾರವಾದ ಸಾಮ್ರಾಜ್ಯವನ್ನು ಸ್ಥಾಪಿಸಿತು. ದೇಶ ವಿದೇಶಗಳ ಭಾಷೆ ಹಾಗೂ ಸಾಹಿತ್ಯ ಸಂಸ್ಕೃತಿಯನ್ನು ಆಂಗ್ಲ

ಪಂಡಿತರು ಮುಕ್ತಮನಸ್ಸಿನಿಂದ ಅಭ್ಯಸಿಸಿದರು. ತನ್ಮೂಲಕ ತಮ್ಮ ಭಾಷೆ ಮತ್ತು ಸಾಹಿತ್ಯವನ್ನು ಹಿಗ್ಗಿಸಿದರು, ಅರಳಿಸಿದರು. ಎಲ್ಲಕ್ಕೂ ಮೇಲಾಗಿ ಮಹಾಮೇಧಾವಿಗಳು ತಮ್ಮ ಆಸೆ, ಆಕಾಂಕ್ಷೆ, ವಿಚಾರ ಮುಂತಾದುವನ್ನು ಆ ಭಾಷೆಯ ಮುಖಾಂತರವಾಗಿಯೇ ಹೇಳಬೇಕೆಂಬ ಉಜ್ವಲ ಅಭಿಮಾನವುಳ್ಳವರಾಗಿದ್ದರು. ಆಂಗ್ಲ ವಿಜ್ಞಾನಿಗಳು, ರಾಜಕಾರಣಿಗಳು, ಅರ್ಥಶಾಸ್ತ್ರಜ್ಞರು ಹೀಗೆ ಎಲ್ಲರೂ ತಮ್ಮ ಭಾಷೆಯನ್ನೇ ಬಳಸಿದುದರ ಪರಿಣಾಮವಾಗಿ ಆ ಭಾಷೆ ಬೆಳೆದು ಇಂದು ಪ್ರಪಂಚದ ದೊಡ್ಡ ಭಾಷೆಗಳಲ್ಲಿ ಒಂದಾಗಿದೆ. ಇದಕ್ಕೆಲ್ಲ ಆಂಗ್ಲ ಜನರ ಸಂಕಲ್ಪ, ಕೃಷಿ ಕಾರಣವೆಂದು ಬೇರೆ ಹೇಳಬೇಕಿಲ್ಲ.

ಪ್ರಶ್ನೆಗಳು :

ಅ) ಭಾಷೆ ಸತ್ವಪೂರ್ಣವಾಗಿ ವಿಕಾಸಗೊಳ್ಳುವುದು ಯಾವಾಗ ?

ಆ) ಆಂಗ್ಲಭಾಷೆ ವಿಶ್ವವ್ಯಾಪಿಯಾಗಲು ಕಾರಣವೇನು ?

## ವಿಭಾಗ – 'ಬಿ'

## (ಅನ್ವಯಿಕ ವ್ಯಾಕರಣ, ಅಲಂಕಾರ, ಛಂದಸ್ಸು)

ಈ ಕೆಳಗಿನ ಪ್ರಶ್ನೆಗಳಿಗೆ / ಅಪೂರ್ಣ ಹೇಳಿಕೆಗಳಿಗೆ ಪ್ರತಿಯೊಂದಕ್ಕೂ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ : $10 \times 1 = 10$

31. 'ಬೆಂಬತ್ತು' ಪದವು ಈ ಸಂಧಿಗೆ ಉದಾಹರಣೆಯಾಗಿದೆ

(ಎ) ಆಗಮ ಸಂಧಿ (ಬಿ) ಆದೇಶ ಸಂಧಿ

(ಸಿ) ಲೋಪ ಸಂಧಿ (ಡಿ) ಜಶ್ತ್ವ ಸಂಧಿ

32. ಕ್ರಿಯಾ ಸಮಾಸಕ್ಕೆ ಉದಾಹರಣೆಯಾದ ಪದವಿದು

(ಎ) ಕಡೆಗಣ್ಣು (ಬಿ) ಮೆಲ್ವಾತು

(ಸಿ) ತಲೆನೋವು (ಡಿ) ಸಾಕ್ಷಿ ಮಾಡಿ

33. ಕ್ರಿಯಾಪದದ ಸ್ಥಾನದಲ್ಲಿದ್ದು ವಾಕ್ಯದ ಅರ್ಥವನ್ನು ಪೂರ್ಣಗೊಳಿಸುವ ಅವ್ಯಯ

(ಎ) ಸಾಮಾನ್ಯ ಅವ್ಯಯ (ಬಿ) ಅನುಕರಣ ಅವ್ಯಯ

(ಸಿ) ಕ್ರಿಯಾರ್ಥಕ ಅವ್ಯಯ (ಡಿ) ಸಂಬಂಧಾರ್ಥಕ ಅವ್ಯಯ

34. ಅನೇಕ ಉಪ-ವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನವಾಗಿದ್ದಾಗ, ಉಪ-ವಾಕ್ಯಗಳು ಮುಗಿದಾಗಲೆಲ್ಲ ಈ ಚಿಹ್ನೆಯನ್ನು ಬಳಸಲಾಗುವುದು.

(ಎ) ಅರ್ಧವಿರಾಮ ಚಿಹ್ನೆ (ಬಿ) ಅಲ್ಪವಿರಾಮ ಚಿಹ್ನೆ

(ಸಿ) ಉದ್ಧರಣ ಚಿಹ್ನೆ (ಡಿ) ವಿವರಣಾತ್ಮಕ ಚಿಹ್ನೆ

35. 'ಕಾರವಾರದಲ್ಲಿ ಮಲೇರಿಯಾ ವ್ಯಾಪಕವಾಗಿ ಹಬ್ಬಿತ್ತು' ಈ ವಾಕ್ಯವು

(ಎ) ಸಂಯೋಜಿತ ವಾಕ್ಯ (ಬಿ) ಪ್ರಶ್ನಾರ್ಥಕ ವಾಕ್ಯ

(ಸಿ) ಮಿಶ್ರ ವಾಕ್ಯ (ಡಿ) ಸಾಮಾನ್ಯ ವಾಕ್ಯ

36. ಪೋರ್ಚುಗೀಸ್ ಭಾಷೆಯಿಂದ ಕನ್ನಡಕ್ಕೆ ಬಂದಿರುವ ಪದ

(ಎ) ಸಾಬೂನು (ಬಿ) ಜಮೀನು

(ಸಿ) ತಾಲ್ಲೂಕು (ಡಿ) ಸಲಾಮು

37. ಸರ್ವನಾಮ ಪದಕ್ಕೆ ಉದಾಹರಣೆಯಿದು

(ಎ) ವ್ಯಾಪಾರಿ (ಬಿ) ನದಿ

(ಸಿ) ಯಾರು (ಡಿ) ರಮೇಶ

38. 'ಓದು' ಪದದ ಸಂಭಾವನಾರ್ಥಕ ರೂಪವಿದು

(ಎ) ಓದರು (ಬಿ) ಓದಿಯಾರು

(ಸಿ) ಓದಲಿ (ಡಿ) ಓದೋಣ

39. 'ಕೌರವನಿಂದ' ಈ ಪದದಲ್ಲಿರುವ ವಿಭಕ್ತಿ

(ಎ) ಪ್ರಥಮಾ (ಬಿ) ದ್ವಿತೀಯಾ

(ಸಿ) ತೃತೀಯಾ (ಡಿ) ಚತುರ್ಥಿ

40. ನಿರೋಷ್ಠ್ಯ, ತಾಲವ್ಯ, ಏಕಾಕ್ಷರ, ಮುರಜಬಂಧ ಇತ್ಯಾದಿ ಪ್ರಕಾರಗಳನ್ನೊಳಗೊಂಡ ಶಬ್ದಾಲಂಕಾರವಿದು

(ಎ) ವೃತ್ತ್ಯನುಪ್ರಾಸ (ಬಿ) ಛೇಕಾನುಪ್ರಾಸ

(ಸಿ) ಯಮಕ (ಡಿ) ಚಿತ್ರಕವಿತ್ವ

ಈ ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿಹೊಂದುವ ಸಂಬಂಧೀ ಪದವನ್ನು ಬರೆಯಿರಿ : 4 × 1 = 4

41. ಹೌದ್ಹೌದು : ದ್ವಿರುಕ್ತಿ :: ಹಾಲ್ಜೇನು : ........................ .

42. ಮುಕ್ತ ಕಂಠ : ತೆರೆದ ಮನಸ್ಸು :: ಸುಸಂಗತ : ........................ .

43. ಪ್ರಸಾದ : ಹಸಾದ :: ವ್ಯಾಪಾರಿ : ........................ .

44. ನಂಬಿಕೆ : ಕೃದಂತಭಾವನಾಮ :: ನಿನಗಾಗಿ : ........................ .

ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ : 1 × 3 = 3

45. "ಎನಗಂ ಪಾಂಡುಗಮಿಲ್ಲ ಭೇದಮಿಳೆಯಂ ಪಚ್ಚಾಳ್ವಮಾ ಪಾಂಡುನಂ"

***ಅಥವಾ***

ಏನು ಹೇಳೈ ಕರ್ಣ ಚಿತ್ತ
ಗ್ಲಾನಿ ಯಾವುದು ಮನಕೆ ಕುಂತೀ
ಸೂನುಗಳ ಬೆಸಕೈಸಿಕೊಂಬುದು ಸೇರದೇ ನಿನಗೆ

ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು ಸಮನ್ವಯಗೊಳಿಸಿ : 1 × 3 = 3

46. "ನೀಚರಿಗೆ ಮಾಡಿದ ಉಪಕಾರವು ಹಾವಿಗೆ ಹಾಲೆರೆದಂತೆ"

***ಅಥವಾ***

'ಮಾರಿಗೌತಣವಾಯ್ತು ನಾಳಿನ ಭಾರತವು'

## ವಿಭಾಗ – 'ಸಿ'

### (ವಾಕ್ಯರಚನೆ ಹಾಗೂ ಬರೆವಣಿಗೆ ಕೌಶಲ)

47. ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ **ಒಂದನ್ನು** ವಿಸ್ತರಿಸಿ ಬರೆಯಿರಿ : 1 × 3 = 3

   * ಸತ್ಯಕ್ಕೆ ಸಾವಿಲ್ಲ, ಸುಳ್ಳಿಗೆ ಸುಖವಿಲ್ಲ.
   * ಗುಣನೋಡಿ ಗೆಳೆತನ ಮಾಡು.
   * ದುಡಿಮೆಯೇ ದುಡ್ಡಿನ ತಾಯಿ.

48. ನಿಮ್ಮನ್ನು ಕಲಬುರಗಿಯ ಶ್ರೀ ಶರಣಬಸವೇಶ್ವರ ಪ್ರೌಢಶಾಲೆಯ 'ಅಭಿನವ' ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ಆಚರಿಸಿದ 'ಸಂವಿಧಾನದ ದಿನಾಚರಣೆ'ಯ ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವಂತೆ ಕೋರಿ 'ವಿಜಯವಾಣಿ' ದಿನಪತ್ರಿಕೆಯ ಸಂಪಾದಕರಿಗೆ ಮನವಿ ಪತ್ರ ಬರೆಯಿರಿ. 1 × 5 = 5

*ಅಥವಾ*

ನಿಮ್ಮನ್ನು ಬಸವಕಲ್ಯಾಣದ ಸರ್ಕಾರಿ ಪ್ರೌಢಶಾಲೆಯ 'ಪ್ರವೀಣ' ಎಂದು ಭಾವಿಸಿಕೊಂಡು ಧಾರವಾಡದ ಕಲ್ಯಾಣನಗರದಲ್ಲಿ ವಾಸವಾಗಿರುವ ತಾಯಿ ಶ್ರೀದೇವಿಯವರಿಗೆ ವಿದ್ಯಾಭ್ಯಾಸದ ಪ್ರಗತಿಯನ್ನು ವಿವರಿಸಿ ಪತ್ರ ಬರೆಯಿರಿ.

49. ಈ ಕೆಳಗಿನ ಯಾವುದಾದರೂ **ಒಂದನ್ನು** ಕುರಿತು ಹದಿನೈದು ವಾಕ್ಯಗಳಿಗೆ ಮೀರದಂತೆ ಪ್ರಬಂಧ ಬರೆಯಿರಿ : 1 × 5 = 5

   * ಅಂತಾರಾಷ್ಟ್ರೀಯ ಭಾವೈಕ್ಯತೆ
   * ರೈತರ ಆತ್ಮಹತ್ಯೆಗೆ ಕಾರಣಗಳು ಮತ್ತು ಪರಿಹಾರೋಪಾಯಗಳು
   * 'ಬಾಲ್ಯವಿವಾಹ' ಒಂದು ಸಾಮಾಜಿಕ ಪಿಡುಗು